ಧಾನ ಸಭೆ. ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
ATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಷ ECT:

ಪತ್ರಿಕೆಯ ಹೆಸರು PER: ವಿಜಯ ಕರ್ನಾಟಕ ದಿನಾಂಕ : DATE : 29/08/2019

## ಇ-ವಿಧಾನ್ ಅಳವಡಿಕೆ: ಕಾಗೇರಿ



**ಬೆಂಗಳೂರು:** ರಾಜ್ಯದಲ್ಲಿ ಇ-ವಿಧಾನ್ ಅಳವಡಿಸಿಕೊಳ್ಳುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ. ಹೊಸದಿಲ್ಲಿಯಲ್ಲಿ ಲೋಕಸಭೆ ಅಧ್ಯಕ್ಷ ಓಂ ಬಿರ್ಲಾ ನೇತೃತ್ವದ ಸಭೆಯಲ್ಲಿ ಈ ಬಗ್ಗೆ ಚರ್ಚೆಯಾಗಿದೆ. ಜತೆಗೆ ಕಾಗದ ರಹಿತ ವಿಧಾನಮಂಡಲ ವ್ಯವಸ್ಥೆ ಮಾಡುವ ಬಗ್ಗೆಯೂ ಗಂಭೀರ ಚರ್ಚೆಯಾಯಿತು. ಡಿಜಿಟಲ್ ತಂತ್ರಜ್ಞಾನದ ಸಮರ್ಥ ಬಳಕೆ ಮಾಡಿಕೊಳ್ಳಬೇಕು. ಈ ಉದ್ದೇಶಕ್ಕೆ ಇ-ಕಾರ್ಯಾಲಯ, ಇ-ಗ್ರಂಥಾಲಯ ನಿರ್ಮಿಸುವಂತೆಯೂ ಲೋಕಸಭೆ ಅಧ್ಯಕ್ಷರು ನಿರ್ದೇಶನ ನೀಡಿದ್ದಾರೆ ಎಂದು ಹೇಳಿದ್ದಾರೆ. ಸೆಪ್ಟೆಂಬರ್ 22 ರಿಂದ 26ರ ವರೆಗೆ ಉಗಾಂಡಾದ ಕಂಪಾಲಾದಲ್ಲಿ 64ನೇ ಕಾಮನ್‌ವೆಲ್ತ್ ಪಾರ್ಲಿಮೆಂಟರಿ ಅಸೋಸಿಯೇಷನ್ ಸಮ್ಮೇಳನದಲ್ಲಿ ದೇಶದ ನಾನಾ ರಾಜ್ಯಗಳ ಸ್ಪೀಕರ್‌ಗಳು ಭಾಗಿಯಾಗುವಂತೆ ಬಿರ್ಲಾ ಸೂಚಿಸಿದರು,'' ಎಂದರು.